**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು ಮತ್ತು ಜೆ.ಎಂ.ಎಫ್.ಸಿ. ರವರ ನ್ಯಾಯಾಲಯ,**
**ಸಕಲೇಶಪುರ**
**C.C.No.1106/2023**

| | | | |
|---|---|---|---|
| **ಹೆಸರುಃ** | **ಪುನೀತ್** | | **CW-8** |
| **ತಂದೆ/ಗಂಡ ಹೆಸರುಃ** | **ನಾಗರಾಜು** | | **PW-8** |
| **ವಯಸ್ಸುಃ** | **36 ವರ್ಷ** | | |
| **ವೃತ್ತಿಃ** | **ಕೂಲಿ ಕೆಲಸ** | | |
| **ವಿಳಾಸಃ** | **ಗಂಗಾಧರ ಯಸಳೂರು** | **ಬಡಾವಣೆ,** | **ದಿನಾಂಕಃ 27-01-2026** |

**ಸಾಕ್ಷಿಯನ್ನು ಕರೆಯಿಸಿ ಪ್ರಮಾಣ ವಚನ ಮಾಡಿಸಲಾಯಿತು.**

**ಮುಖ್ಯ ವಿಚಾರಣೆಃ ಮಾನ್ಯ ಎ ಪಿ ಪಿ ಯವರಿಂದ.**

ಆರೋಪಿತರು ನಮ್ಮ ಊರಿನವರು ಇರುತ್ತಾರೆ. ಸಾಕ್ಷಿಯು ನಿಪಿ-2 ರಲ್ಲಿನ ತನ್ನ ಸಹಿ ನೋಡಿ ಗುರುತಿಸಿದ್ದು ಅದನ್ನು ನಿಪಿ-7 ರಲ್ಲಿ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು, ಅದನ್ನು ನಿಪಿ 7 ಬಿ ಎಂದು ಗುರುತಿಸಲಾಯಿತು. ಸದರಿ ಸಹಿಯನ್ನು ಒಂದು ವರ್ಷದ ಹಿಂದೆ ಠಾಣೆಯಲ್ಲಿ ಮಾಡಿರುತ್ತೇನೆ. ಪೋಲೀಸರು ನನ್ನ ಸಮಕ್ಷಮ ಯಾವುದೇ ಪಂಚನಾಮೆ ಮಾಡಿಲ್ಲ ಮತ್ತು ಯಾವುದೇ ವಸ್ತುಗಳನ್ನು ವಶಪಡಿಸಿಕೊಂಡಿಲ್ಲ. ಆ ಸಮಯದಲ್ಲಿ ನಾನು ಒಬ್ಬನೇ ಇದ್ದೆ. ಅದರಲ್ಲಿರುವ ಮಾಹಿತಿಗಳು ನನಗೆ ಗೊತ್ತಿಲ್ಲ. ನಿ ಪಿ 9 ಕಾರನ್ನು ನಾನು ಠಾಣೆಯಲ್ಲಿ ನೋಡಿರುತ್ತೇನೆ.

***(ಈ ಹಂತದಲ್ಲಿ ಸಾಕ್ಷಿಯನ್ನು ಭಾಗಶಃ ಪ್ರತಿಕೂಲ ಎಂದು ಪರಿಗಣಿಸಿ ಪಾಟೀ ಸವಾಲು ಮಾಡಲು ಮಾನ್ಯ ಸ ಸ ಅ ಅವರು ಅನುಮತಿ ಕೋರಿದ್ದು ಅನುಮತಿ ನೀಡಲಾಯಿತು)***

**ಪಾಟೀ ಸವಾಲುಃ ಮಾನ್ಯ ಎ ಪಿ ಪಿ ಯವರಿಂದ.**

ದಿಃ 21-07-2023 ರಂದು ಮ 12 ರಿಂದ 12.45 ರವರೆಗೆ ಪೋಲೀಸರು ನಿ ಪಿ 7 ರಂತೆ ಪಂಚನಾಮೆ ಮಾಡಿ ನನ್ನ ಸಮಕ್ಷಮ ನಿ ಪಿ 9 ಕಾರನ್ನು ವಶಪಡಿಸಿಕೊಂಡಿರುತ್ತಾರೆಂದರೆ ಸರಿಯಲ್ಲ. ಅದರ ನಂಬರ ಕೆ ಎ 03 ಎಂ ಇ 5814 ಆಗಿರುತ್ತದೆ ಎಂದರೆ ಗೊತ್ತಿಲ್ಲ. ನನ್ನ ಸಮಕ್ಷಮ ಪೋಲೀಸರು ಪಂಚನಾಮೆ ಮಾಡಿ ಕಾರನ್ನು ವಶಪಡಿಸಿಕೊಂಡಿದ್ದರು ಸಹ ನಾನು ಆರೋಪಿತರಿಗೆ ಸಹಾಯ ಮಾಡಲು ಸುಳ್ಳು ಸಾಕ್ಷ್ಯ ನುಡಿಯುತ್ತಿದ್ದೇನೆ ಎಂದರೆ ಸರಿಯಲ್ಲ.

**ಪಾಟೀ ಸವಾಲುಃ ಆರೋಪಿತರ ಪರ ವಕೀಲರಿಂದಃ ಇಲ್ಲ**

**ಮರು ವಿಚಾರಣೆಃ ಇಲ್ಲ**

ಉಕ್ತ ಲೇಖನದಂತೆ ಮುಕ್ತ ನ್ಯಾಯಾಲಯದಲ್ಲಿ ಬೆರಳಚ್ಚು ಮಾಡಲಾಯಿತು.

ಓ ಹೆ ಕೇ ಸ ಇ

**ಸಹಿ/-**

**ಹೆಚ್ಚುವರಿ ಸಿವಿಲ್ ನ್ಯಾಯಾಧೀಶರು**

**ಮತ್ತು ಜೆ.ಎಂ.ಎಫ್.ಸಿ**

**ಸಕಲೇಶಪುರ**